ಸರ್ಕಾರಿ ಕಿರಿಯ ಕಾಲೇಜು ಮಂಜೂರಾತಿ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 39(46)

ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ)

ಅ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕು ಹಂದನಕೆರೆ ಹೋಬಳಿ ಕೇಂದ್ರಕ್ಕೆ ಸರ್ಕಾರಿ ಕಿರಿಯ ಕಾಲೇಜು (ಕಲಾ ವಿಭಾಗ) ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹಂದನಕೆರೆ ಹೋಬಳಿ ಕೇಂದ್ರಕ್ಕೆ ಈ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಕಿರಿಯ ಕಾಲೇಜು ಕಲಾ ವಿಭಾಗ ಮಂಜೂರು ಮಾಡಲಾಗುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆ) ಸ್ಥಳೀಯ ಅಗತ್ಯತೆಗಳನ್ನು ಪರಿಗಣಿಸಿ, ಅನುದಾನದ ಲಭ್ಯತೆಯನ್ನು ಆಧರಿಸಿ ಅಗತ್ಯವಿರುವ ಸ್ಥಳಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲು ಕ್ರಮ ವಹಿಸಲಾಗುವುದು.

ಪದವಿ ಪೂರ್ವ ಕಾಲೇಜು ಮಂಜೂರಾತಿ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 32 (10)

ಶ್ರೀ ರುದ್ರೇಶಗೌಡ.ವೈ.ಎನ್. (ಬೇಲೂರು)ಅ) ಬೇಲೂರು ತಾಲ್ಲೂಕಿನ ಗೆಂಡೇಹಳ್ಳಿ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಮಂಜೂರಾಗಿದ್ದಲ್ಲಿ, ಸ್ವಂತ ಕಟ್ಟಡದಲ್ಲಿ ತರಗತಿಗಳು ನಡೆಯುತ್ತಿವೆಯೇ?